ಕ್ರಿಮಿನಲ್ ಮಿಸ್. ಸಂಖ್ಯೆ: 75/2026

**ಪ್ರಾ.ಸಾ-1**

**ದಿನಾಂಕ 06.06.2026 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ ಬಿ ಆರ್ ವಕೀಲರಿಂದ ಅರ್ಜಿದಾರರ ಪರವಾಗಿ**

ನಾನು ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಎದುರುದಾರರು ನೀಡಿರುವ ಅಲಭ್ಯ ಪ್ರಮಾಣ ಪತ್ರ ನಿಶಾನೆ ಪಿ-1, ವಂಶವೃಕ್ಷದ ಪ್ರಮಾಣ ಪತ್ರ ನಿಶಾನೆ ಪಿ-2 ಎಂದು, ನನ್ನ ಆಧಾರ್ ಕಾರ್ಡ ನ ಪ್ರತಿಯನ್ನು ನಿಶಾನೆ ಪಿ-3 ಎಂದು, 2 ನೇ ಅರ್ಜಿದಾರರ ಆಧಾರ್ ಕಾರ್ಡ ಪ್ರತಿ ನಿಶಾನೆ ಪಿ-4, ಹಲೋ ಮೈಸೂರು ದಿನಪತ್ರಿಕೆ ಪ್ರಕಟಣೆಯನ್ನು ನಿಶಾನೆ ಪಿ-5 ಎಂದು, ಕೆಮ್ಮುಗಿಲು ಪತ್ರಿಕೆಯ ಪತ್ರಿಕಾ ಪ್ರಕಟಣೆ ನಿಶಾನೆ ಪಿ-6 ಎಂದು ಗುರುತಿಸಲಾಯಿತು.

**ಈ ಮೂಲಕ ನನ್ನ ಸಾಕ್ಷ್ಯವನ್ನು ಅಂತ್ಯಗೊಳಿಸಿದ್ದು, ಅರ್ಜಿಯನ್ನು ಪುರಸ್ಕರಿಸಲು ಪ್ರಾರ್ಥನೆ.**

**ಎದುರುದಾರರು ಏಕಪಕ್ಷೀಯವಾಗಿರುವುದರಿಂದ ಪಾಟೀ ಸವಾಲನ್ನು ಇಲ್ಲವೆಂದು ಪರಿಗಣಿಸಲಾಯಿತು.**

**ಮರು ವಿಚಾರಣೆ ಇರುವುದಿಲ್ಲ.**

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ. ತಿ.ನರಸೀಪುರ.**